# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 704 |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಪ್ರತಾಪ್‌ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 12.07.2023 |
| ಉತ್ತರಿಸುವ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನ ಕೊಯ್ಲಾದಲ್ಲಿ ಪಶುಸಂಗೋಪನಾ ಕಾಲೇಜನ್ನು ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆಯೇ; ಹಾಗಿದ್ದಲ್ಲಿ, ಸದರಿ ಕಾಲೇಜಿನಲ್ಲಿ ಶೈಕ್ಷಣಿಕ ಚಟುಚಟಿಕೆಗಳು ಪ್ರಾರಂಭಗೊಂಡಿವೆಯೇ; | ಕರ್ನಾಟಕ ಪಶುವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರಿನ ಅಡಿಯಲ್ಲಿ ಬರುವ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನ ಕೊಯ್ಲಾದಲ್ಲಿ ಪಶುವೈದ್ಯಕೀಯ ಮಹಾವಿದ್ಯಾಲಯವನ್ನು ಸ್ಥಾಪಿಸಲು ಸರ್ಕಾರದ ಆದೇಶ ಸಂಖ್ಯೆ:ಪಸಂಮೀ 115 ಪಅಸೇ 2012 ದಿನಾಂಕ:7.8.2012 ರಂತೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ. ಕಾಮಗಾರಿಗಳು ಹಾಗೂ ಮೂಲ ಸೌಕರ್ಯಗಳನ್ನು ಒದಗಿಸುವ ಕಾರ್ಯವು ಪ್ರಗತಿಯಲ್ಲಿದ್ದು, ಈವರೆವಿಗೂ ಶೈಕ್ಷಣಿಕ ಚಟುವಟಿಕೆಗಳು ಪ್ರಾರಂಭಗೊಂಡಿರುವುದಿಲ್ಲ. |
| ಆ) | ಸದರಿ ಕಾಲೇಜಿನಲ್ಲಿ ಶೈಕ್ಷಣಿಕ ಚಟುವಟಿಕೆಗಳು ಪ್ರಾರಂಭಗೊಳ್ಳದಿದ್ದಲ್ಲಿ, ದೀರ್ಘಕಾಲದ ವಿಳಂಬಕ್ಕೆ ಕಾರಣಗಳೇನು; | ಸದರಿ ಕಾಲೇಜಿನಲ್ಲಿ ಶೈಕ್ಷಣಿಕ ಚಟುವಟಿಕೆಗಳು ಪ್ರಾರಂಭಗೊಳ್ಳಲು ಪಶುವೈದ್ಯಕೀಯ ಕಾಲೇಜಿನ ಮುಖ್ಯ ಕಟ್ಟಡ, ಪಶುವೈದ್ಯಕೀಯ ಆಸ್ಪತ್ರೆ ಕಟ್ಟಡ, ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯ, ಅತಿಥಿ ಗೃಹ ಕಾಮಗಾರಿಗಳು ಪೂರ್ಣಗೊಂಡಿರುತ್ತವೆ.<br><br>ಮುಂದುವರೆದು, ಎರಡನೇ ಹಂತದ ಕಾಮಗಾರಿಗಳಾದ ಗ್ರಂಥಾಲಯ, ಕುರಿ, ಮೇಕೆ, ಹಸು, ಹಂದಿ ಮತ್ತು ಕೋಳಿ ಫಾರ್ಮಗಳು, ರಸ್ತೆಗಳು, ಕಾಂಪೌಂಡ್ ಗೋಡೆ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವಸತಿ ಗೃಹಗಳು, ಸಭಾಂಗಣ, ನೀರಿನ ಸರಬರಾಜು, ವಿದ್ಯುತ್‌ಚಕ್ತಿ, ಕಾಮಗಾರಿಗಳಿಗೆ 01.07.2023 ರಂದು ಜರುಗಿದ ವಿಶ್ವವಿದ್ಯಾಲಯದ 108ನೇ ವ್ಯವಸ್ಥಾಪಕ ಮಂಡಳಿ ಸಭೆಯಲ್ಲಿ ಅನುಮೋದನೆ ದೊರೆತಿರುತ್ತದೆ. ಈ ಕಾಮಗಾರಿಗಳ ಜೊತೆಗೆ ಪಶುವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ, ಬೋಧನಾ ಕೊಠಡಿಗಳು, ಪ್ರಯೋಗಶಾಲೆಗಳು, ವಿದ್ಯಾರ್ಥಿ ನಿಲಯಗಳು, ಗ್ರಂಥಾಲಯ ಹಾಗೂ ಸಭಾಂಗಣಕ್ಕೆ ವಿವಿಧ ಸಲಕರಣೆಗಳು, ಪೀಠೋಪಕರಣಗಳು, ಯಂತ್ರಗಳು ಬೇಕಾಗಿದ್ದು ಇವೆಲ್ಲವನ್ನು ಪೂರ್ಣಗೊಳಿಸಲು ಹಣಕಾಸಿನ ಅವಶ್ಯಕತೆ ಇರುತ್ತದೆ ಎಂದು ವಿಶ್ವವಿದ್ಯಾಲಯವು ವರದಿಸಿದ್ದು, ಪ್ರಸ್ತಾವನೆಯು ಸ್ವೀಕೃತಗೊಂಡ ನಂತರ ಆರ್ಥಿಕ ಇಲಾಖೆಯ ಸಹಮತಿ ಪಡೆಯಬೇಕಾಗಿರುತ್ತದೆ. |
| ಇ) | ಯಾವ ಶೈಕ್ಷಣಿಕ ವರ್ಷದಿಂದ ಸದರಿ ಕಾಲೇಜಿನಲ್ಲಿ ತರಗತಿಗಳನ್ನು ಪ್ರಾರಂಭಿಸಲಾಗುವುದು; | |

| | | |
|---|---|---|
| | | ಮೊದಲನೇ ಹಂತದ ಮತ್ತು ಎರಡನೇ ಹಂತದ ಕಾಮಗಾರಿಗಳ ಜೊತೆಗೆ ವಿವಿಧ ದರ್ಜೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ನೇಮಕಾತಿಗೆ ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಆರ್ಥಿಕ ಇಲಾಖೆಯಿಂದ ನೇಮಕಾತಿ ಅನುಮತಿ ದೊರೆತ ನಂತರ ಸಿಬ್ಬಂದಿಗಳ ನೇಮಕಾತಿ ಕಾರ್ಯ ಪೂರ್ಣಗೊಂಡ ಮೇಲೆ ವಿಶ್ವವಿದ್ಯಾಲಯದಿಂದ ಭಾರತೀಯ ಪಶುವೈದ್ಯಕೀಯ ಪರಿಷತ್ತು, ನವದೆಹಲಿಗೆ ಪಶುವೈದ್ಯಕೀಯ ಮಹಾವಿದ್ಯಾಲಯದ ಪ್ರಾರಂಭಕ್ಕೆ ಅನುಮತಿ ಕೋರಬೇಕಾಗಿರುತ್ತದೆ. ಪರಿಷತ್ತಿನ ಅಧಿಕಾರಿಗಳ ಭೇಟಿ, ಪರಿವೀಕ್ಷಣೆಗಳ ನಂತರ ಅನುಮತಿಯೊಂದಿಗೆ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನ ಕೊಯ್ಲಾದಲ್ಲಿನ ಪಶುಸಂಗೋಪನಾ ಕಾಲೇಜಿನಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಲಾಗುವುದು. |
| ಈ) | ಸದರಿ ಕಾಲೇಜಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಈಗಾಗಲೇ ಒದಗಿಸಲಾಗಿದೆಯೇ; ಒದಗಿಸದಿದ್ದಲ್ಲಿ, ಬಾಕಿ ಉಳಿದಿರುವ ಮೂಲ ಸೌಕರ್ಯಗಳನ್ನು ಯಾವ ಕಾಲಮಿತಿಯೊಳಗೆ ಕಲ್ಪಿಸಲಾಗುವುದು? | ಎರಡನೇ ಹಂತದ ಕೆಲಸಗಳಿಗೆ ಅನುದಾನ ಬಿಡುಗಡೆಯಾದ ನಂತರ ಮತ್ತು ಸಿಬ್ಬಂದಿ ನೇಮಕಾತಿಯೊಂದಿಗೆ ಒಂದನೇ ಮತ್ತು ಎರಡನೇ ಪಶುವೈದ್ಯಕೀಯ ಸ್ನಾತಕ ಪದವಿಗೆ ಅಗತ್ಯವಾಗಿ ಬೇಕಾಗಿರುವ ಕಟ್ಟಡ ಕಾಮಗಾರಿಗಳನ್ನು ಮತ್ತು ಸೌಲಭ್ಯಗಳನ್ನು ಪೂರ್ಣಗೊಳಿಸಿ ಭಾರತೀಯ ಪಶುವೈದ್ಯಕೀಯ ಪರಿಷತ್ತಿನ ಅನುಮತಿಯೊಂದಿಗೆ 2024-25 ನೇ ಶೈಕ್ಷಣಿಕ ವರ್ಷದ ಪ್ರಾರಂಭದ ವೇಳೆಗೆ ಬಾಕಿ ಉಳಿದಿರುವ ಮೂಲ ಸೌಕರ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಪಸಂಮೀ ಇ-140 ಪಅಸೇ 2023**

(ಕೆ. ವೆಂಕಟೇಶ್)

**ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**